# Akashvani : Bangalore
# Regional Bulletin In Kannada
# 08.02.2026 / 18.40 hrs
# ಆಕಾಶವಾಣಿ ಬೆಂಗಳೂರು
# ಪ್ರದೇಶ ಸಮಾಚಾರ
# 08.02.2026 / 18.40 hrs

********************

<u>ಮುಖ್ಯಾಂಶಗಳು</u>

- ಕೇಂದ್ರ ಸರ್ಕಾರದ ಬೇಳೆ ಮಿಷನ್ ಅಡಿ ರಾಜ್ಯಕ್ಕೆ 191 ಕೋಟಿ 67 ಲಕ್ಷ ರೂಪಾಯಿ ಅನುದಾನ ಪತ್ರ ಹಸ್ತಾಂತರ
- ಆಮದು ಮಾಡಿಕೊಳ್ಳುವ ಹಣ್ಣು ತರಕಾರಿ ತಳಿಗಳನ್ನು ಅಭಿವೃದ್ಧಿ ಪಡಿಸಲು ವಿಜ್ಞಾನಿಗಳಿಗೆ – ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಕರೆ
- ಭದ್ರಾವತಿ ವಿಶ್ವೇಶ್ವರಯ್ಯ ಉಕ್ಕಿನ ಕಾರ್ಖಾನೆ ಪುನಶ್ಚೇತನಕ್ಕಾಗಿ ಸುಮಾರು 5 ಸಾವಿರ ಕೋಟಿ ರೂಪಾಯಿ ಬಿಡುಗಡೆ – ಕೇಂದ್ರ ಕೈಗಾರಿಕಾ ಸಚಿವ ಹೆಚ್.ಡಿ. ಕುಮಾರಸ್ವಾಮಿ ಭರವಸೆ
- ಬಂಡೀಪುರದಲ್ಲಿ ನಾಳೆ ಅಂತಾರಾಷ್ಟ್ರೀಯ ಮಟ್ಟದ ಹುಲಿ ಮೈತ್ರಿ ಶೃಂಗಸಭೆ ಆರಂಭ ; 23 ದೇಶಗಳ ಪ್ರತಿನಿದಿಗಳು ಭಾಗಿ
- ರಾಜ್ಯ ಸಚಿವ ಸಂಪುಟ ವಿಸ್ತರಣೆ ; ಅಂತಿಮ ನಿರ್ಧಾರ ಹೈಕಮಾಂಡ್‌ಗೆ ಸೇರಿದ್ದು, ಮುಖ್ಯ ಸಚೇತಕ ಸಲೀಂ ಅಹಮ್ಮದ್

********************

ತೊಗರಿಬೇಳೆ ಉತ್ಪಾದನೆಯಲ್ಲಿ ಮುಂಚೂಣಿಯಲ್ಲಿರುವ ಕರ್ನಾಟಕ ಸಂಸ್ಕರಣೆಗಾಗಿ 35 ಬೇಳೆ ಗಿರಣಿಗಳನ್ನು ಸ್ಥಾಪಿಸಬೇಕೆಂದು ಕೇಂದ್ರ ಕೃಷಿ ಸಚಿವ ಸೂಚಿಸಿದ್ದಾರೆ.

ಅವರು ಬೆಂಗಳೂರಿನಲ್ಲಿ ಇಂದು ಅಂತಾರಾಷ್ಟ್ರೀಯ ವಾಣಿಜ್ಯ ಮೇಳ – ಉತ್ಪಾದನೋತ್ತರ ಕೃಷಿ, ರೈತರ ಸಬಲೀಕರಣ ಕಾರ್ಯಕ್ರಮದಲ್ಲಿ ಅವರು ಇಂದು ಪಾಲ್ಗೊಂಡು ಮಾತನಾಡಿದರು.

ದ್ವಿದಳ ಧಾನ್ಯ, ಬೇಳೆ ಮಿಷನ್ ಅಡಿ ಪ್ರತಿ ಗಿರಣಿಗೆ 25 ಲಕ್ಷ ರೂಪಾಯಿ ಸಹಾಯ ಧನ ನೀಡಲಾಗುವುದು ಎಂದು ಕೇಂದ್ರ ಸಚಿವರು ಈ ಸಂದರ್ಭದಲ್ಲಿ ಪ್ರಕಟಿಸಿದರು.

ಧ್ವನಿ : ಶಿವರಾಜ್ ಸಿಂಗ್ ಚೌಹಾಣ್

ಕರ್ನಾಟಕ ತೊಗರಿಬೇಳೆ ಉತ್ಪಾದನೆಯಲ್ಲಿ ಅಗ್ರಸ್ಥಾನದಲ್ಲಿದೆ. ಈ ಬೆಳೆಯ ಎಕರೆವಾರು ಇಳುವರಿಯ ಉತ್ಪಾದಕತೆ ಹೆಚ್ಚಿಸಲು ಕೇಂದ್ರ ಸರ್ಕಾರ ತಾಂತ್ರಿಕ ಸಹಯೋಗ ನೀಡಲಿದೆ. ಉತ್ತಮ ಇಳುವರಿಗೆ ಉತ್ತಮ ಬೀಜ ಅಗತ್ಯವಿದೆ ; ಈ ಹಿನ್ನೆಲೆಯಲ್ಲಿ 25 ಬೀಜ ಗ್ರಾಮಗಳನ್ನು ರಾಜ್ಯಸರ್ಕಾರ ರೂಪಿಸಬೇಕು. ಮಾದರಿ ಪ್ರದರ್ಶನಕ್ಕಾಗಿ ರೈತರಿಗೆ 10 ಸಾವಿರ ರೂಪಾಯಿ ಪ್ರೋತ್ಸಾಹ ಧನ ನೀಡಲಾಗುವುದು ಎಂದರು.

ಧ್ವನಿ : ಶಿವರಾಜ್ ಸಿಂಗ್ ಚೌಹಾಣ್

ತೆಂಗು ಉತ್ಪನ್ನವನ್ನು ಹೆಚ್ಚಿಸುವ ನಿಟ್ಟಿನಲ್ಲಿ ಪ್ರಧಾನಮಂತ್ರಿಯವರ ನಿರ್ದೇಶನದ ಮೇರೆಗೆ ತೆಂಗು ಅಭಿವೃದ್ಧಿಗೆ ಕಾರ್ಯಕ್ರಮ ಆರಂಭಿಸಲಾಗುವುದು. ಯೋಜನೆಯಡಿ ರೋಗ ಪೀಡಿತ ಹಳೆಯ ಮರಗಳ ಬದಲಿಸಲು ಉತ್ತೇಜಿಸಲಾಗುವುದು.

ರೈತರು ಈ ಯೋಜನೆಯ ಪ್ರಯೋಜನ ಪಡೆಯಬೇಕು ಎಂದು ಅವರು ಮನವಿ ಮಾಡಿದರು. ರೈತರ ನೆರವಿನಿಂದ ಭಾರತ ವಿಶ್ವದಲ್ಲೇ ಅಗ್ರಮಾನ್ಯ ಭತ್ತ ಬೆಳೆಯುವ ದೇಶವಾಗಿ ಹೊರಹೊಮ್ಮಿದೆ. ಚೀನಾವನ್ನು ಹಿಂದಿಕ್ಕಿದೆ. ಇದಕ್ಕಾಗಿ ರೈತರು ಅಭಿನಂದನಾರ್ಹರು. ನೀರಿನ ಮಿತಬಳಕೆ, ಕಡಿಮೆ ಶ್ರಮದಲ್ಲಿ ಉತ್ತಮ ಇಳುವರಿ ನೀಡುವ ಅಕ್ಕಿತಳಿಗಳನ್ನು ವಿಜ್ಞಾನಿಗಳು ಅಭಿವೃದ್ಧಿಪಡಿಸುತ್ತಿದ್ದು, ರೈತರು ಇದರ ಪ್ರಯೋಜನ ಪಡೆಯಬೇಕು ಎಂದರು.

ಕಾಫಿ, ಕೊಕ್ಕೊ, ಫಲಪುಷ್ಪ, ತರಕಾರಿ ಸೇರಿದಂತೆ ತೋಟಗಾರಿಕೆ ಬೆಳೆಗಳಿಗೆ ಕೇಂದ್ರ ಸರ್ಕಾರ ಬೆಂಬಲ ನೀಡುತ್ತಿದೆ ಎಂದು ಸಚಿವ ಶಿವರಾಜ್ ಸಿಂಗ್ ಚೌಹಾಣ್ ಹೇಳಿದರು. ಕರ್ನಾಟಕದ ಸಿರಿಧಾನ್ಯದ ಬ್ರ್ಯಾಂಡ್‌ಗಳನ್ನು ದೇಶ–ವಿದೇಶಗಳಲ್ಲಿ ಪ್ರಚುರಗೊಳಿಸಲು ಕೇಂದ್ರ ಸರ್ಕಾರ ಸಿದ್ಧವಿದೆ ಎಂದು ಅವರು ಹೇಳಿದರು.

ದ್ವಿದಳ ಧಾನ್ಯ ಮಿಷನ್ ಅಡಿ ರಾಜ್ಯಕ್ಕೆ ಅನುದಾನ ನೀಡುವ 191 ಕೋಟಿ 67 ಲಕ್ಷ ರೂಪಾಯಿ ಮೊತ್ತದ ನೆರವು ಪತ್ರವನ್ನು ಈ ಸಂದರ್ಭದಲ್ಲಿ ಕೇಂದ್ರ ಸಚಿವ ಶಿವರಾಜ್ ಸಿಂಗ್ ಚೌಹಾಣ್, ರಾಜ್ಯದ ಕೃಷಿ ಸಚಿವ ಚಲುವರಾಯಸ್ವಾಮಿ ಅವರಿಗೆ ಹಸ್ತಾಂತರಿಸಿದರು. ಇದಲ್ಲದೇ ರಾಜ್ಯಕ್ಕೆ ನೀಡಬೇಕಾಗಿರುವ 154 ಕೋಟಿ ರೂಪಾಯಿ ಅನುದಾನವನ್ನು ಬಿಡುಗಡೆ ಮಾಡುವುದಾಗಿ ಕೇಂದ್ರ ಸಚಿವರು ತಿಳಿಸಿದರು.

********************

ಯಾವುದೇ ಕೃಷಿ ಉತ್ಪನ್ನ ಆಮದು ಮಾಡಿಕೊಳ್ಳುವ ವಿರುದ್ಧ ಕೇಂದ್ರ ಸರ್ಕಾರ ಕಠಿಣ ನಿಲುವು ಹೊಂದಿದ್ದು, ಇಂತಹ ಹಣ್ಣು ತರಕಾರಿಗಳ ಹೊಸ ತಳಿಗಳನ್ನು ಅಭಿವೃದ್ಧಿ ಪಡಿಸುವ ಕಾರ್ಯ ಕೈಗೊಳ್ಳಬೇಕು ಎಂದು ವಿಜ್ಞಾನಿಗಳಿಗೆ ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಕರೆ ನೀಡಿದ್ದಾರೆ.

ಅವರು, ಬೆಂಗಳೂರು ಸಮೀಪದ ಹೆಸರುಘಟ್ಟದಲ್ಲಿ ತೋಟಗಾರಿಕಾ ಸಂಶೋಧನಾ ಸಂಸ್ಥೆಗೆ ಭೇಟಿ ನೀಡಿ, ಹಣ್ಣು, ತರಕಾರಿ ಬೆಳೆ ಮಾದರಿ ವೀಕ್ಷಿಸಿದ ನಂತರ ಕೃಷಿ ವಿಜ್ಞಾನಿಗಳೊಂದಿಗೆ ಸಂವಾದ ನಡೆಸಿದರು.

ದೀರ್ಘಬಾಳಿಕೆಯ ಸುಸ್ಥಿರತೆವುಳ್ಳ ತಳಿ ಅಭಿವೃದ್ಧಿಯತ್ತ ಗಮನ ಹರಿಸಬೇಕು. ಸಂಸ್ಕರಿಸಬಹುದಾದ ಹಣ್ಣು, ತರಕಾರಿ ತಳಿ ಸಂಶೋಧನೆಗೆ ಒತ್ತು ನೀಡಬೇಕು. ರೋಗ ನಿರೋಧಕ ಶಕ್ತಿಯುಳ್ಳ ಮತ್ತು ಉತ್ತಮ ಇಳುವರಿಯ ಬೀಜಗಳು ರೈತರಿಗೆ ಈಗೀನ ನಾಲ್ಕೈದು ವರ್ಷಗಳಿಂದ 2 ವರ್ಷಗಳಿಗೆ ತಲುಪುವಂತೆ ನೋಡಿಕೊಳ್ಳಬೇಕು. ಸಣ್ಣ ರೈತರಿಗೆ ಅನುಕೂಲವಾದ ಸಮಗ್ರ ಕೃಷಿ ಅಭಿವೃದ್ಧಿಯತ್ತ ಗಮನ ಹರಿಸಬೇಕು ಎಂದರು.

ಐಐಎಚ್‌ಆರ್ ಸಂಸ್ಥೆ ಚಿಂತನಾ ಕಾರ್ಯಕ್ರಮ ಏರ್ಪಡಿಸಬೇಕು ಹಾಗೂ ಅದಕ್ಕೆ ತಾವು ಬರುವುದಾಗಿಯೂ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಹೇಳಿದರು.

********************

ಕೇಂದ್ರ ಬಜೆಟ್‌ನಲ್ಲಿ ಆರೋಗ್ಯ, ಶಿಕ್ಷಣ, ಉತ್ಪಾದನೆ ಕೃಷಿ ಮತ್ತು ಮೂಲಸೌಕರ್ಯ ಕ್ಷೇತ್ರಕ್ಕೆ ಹೆಚ್ಚು ಒತ್ತು ನೀಡಲಾಗಿದೆ. 17 ಕ್ಯಾನ್ಸರ್ ಔಷಧಿಗಳಿಗೆ ಸಂಪೂರ್ಣ ತೆರಿಗೆ ವಿನಾಯಿತಿ ನೀಡಲಾಗಿದ್ದು, ಇದು ಉತ್ತಮ ಬೆಳವಣಿಗೆಯಾಗಿದೆ ಎಂದು ಸಂಸದ ಡಾ.ಸಿ.ಎನ್.ಮಂಜುನಾಥ್ ರಾಮನಗರದಲ್ಲಿಂದು ಹೇಳಿದ್ದಾರೆ.

ಬೆಂಗಳೂರಿನ ನಿಮ್ಹಾನ್ಸ್ ಆಸ್ಪತ್ರೆಗೆ ನಾರ್ತ್ ಕಾಂಪ್ಲೆಕ್ಸ್ ನಿರ್ಮಾಣಕ್ಕೆ 500 ಕೋಟಿ ರೂಗಳನ್ನು ತೆಗೆದಿರಿಸಲಾಗಿದ್ದು ಇದರಿಂದ 300 ಹಾಸಿಗೆಯ ಪಾಲಿಟ್ರಾಮ ಸೆಂಟರ್ ಪ್ರಾರಂಭಿಸಲಾಗುವುದು ಅಲ್ಲದೆ ಹೊಸ ಒಪಿಡಿ ಬ್ಲಾಕ್ ಪ್ರಾರಂಭಕ್ಕೆ ಹಣ ನಿಗದಿಪಡಿಸಲಾಗಿದೆ ಎಂದು ಅವರು ತಿಳಿಸಿದರು.

********************

ಭದ್ರಾವತಿಯ ವಿಶ್ವೇಶ್ವರಯ್ಯ ಉಕ್ಕಿನ ಕಾರ್ಖಾನೆಯ ಪುನಶ್ಚೇತನಕ್ಕಾಗಿ 4 ಸಾವಿರದ 500 ರಿಂದ 5 ಸಾವಿರ ಕೋಟಿ ರೂಪಾಯಿ ಬಿಡುಗಡೆಗೊಳಿಸಲಾಗುವುದು ಎಂದು ಕೇಂದ್ರ ಬೃಹತ್ ಕೈಗಾರಿಕಾ ಸಚಿವ ಹೆಚ್.ಡಿ. ಕುಮಾರಸ್ವಾಮಿ ತಿಳಿಸಿದ್ದಾರೆ.

ಮೈಸೂರಿನಲ್ಲಿ ಕೇಂದ್ರ ಬಜೆಟ್ ಕುರಿತು ನಡೆದ ಪತ್ರಿಕಾಗೋಷ್ಠಿಯಲ್ಲಿ ಇಂದು ಮಾತನಾಡಿದ ಅವರು, 2026–27ರ ಕೇಂದ್ರ ಬಜೆಟ್‌ನಲ್ಲಿ ಕಟ್ಟಡ ನಿರ್ಮಾಣ ಹಾಗೂ ಮೂಲಭೂತ ಸೌಕರ್ಯ ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡಲಾಗಿದೆ ಎಂದು ಹೇಳಿದರು.

ರಾಜ್ಯದಲ್ಲಿ ಆಟೋಮೋಟಿವ್ ರಿಸರ್ಚ್ ಅಸೋಸಿಯೇಷನ್ ಆಫ್ ಇಂಡಿಯಾ – ಅರೈ ಘಟಕ ಸ್ಥಾಪಿಸುವ ಮೂಲಕ ನಿರುದ್ಯೋಗ ಸಮಸ್ಯೆ ನಿವಾರಿಸಲು ಕೇಂದ್ರ ಸರ್ಕಾರ ಮುಂದಾಗಿದೆ ; ಮಂಡ್ಯದಲ್ಲಿ ಅರೈ ಘಟಕ ಸ್ಥಾಪನೆಗಾಗಿ 100 ಎಕರೆ ಭೂಮಿ ನೀಡುವಂತೆ ರಾಜ್ಯ ಸರ್ಕಾರಕ್ಕೆ ಪತ್ರ ಬರೆಯಲಾಗಿದೆ ; ಈ ಯೋಜನೆಗೆ ಒಟ್ಟು 7 ಸಾವಿರದ 280 ಕೋಟಿ ರೂಪಾಯಿ ಮೀಸಲಿಡಲಾಗಿದ್ದು, ಪ್ರಾಥಮಿಕ ಹಂತದಲ್ಲಿ 500 ಕೋಟಿ ರೂಪಾಯಿ ಬಿಡುಗಡೆ ಮಾಡಲಾಗುತ್ತದೆ ; ಇದರಿಂದ ನಿರುದ್ಯೋಗ ಸಮಸ್ಯೆ ತಗ್ಗಿಸಲು ಸಾಧ್ಯವಾಗಲಿದೆ ಎಂದು ಹೇಳಿದರು.

ಧ್ವನಿ : ಹೆಚ್.ಡಿ.ಕುಮಾರಸ್ವಾಮಿ

ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ನಡುವೆ ಉತ್ತಮ ಸಮನ್ವಯ ಇದ್ದರೆ ರಾಜ್ಯಕ್ಕೆ ಅಗತ್ಯವಿರುವ ಯೋಜನೆಗಳನ್ನು ಪಡೆದುಕೊಳ್ಳಲು ಸಾಧ್ಯವಾಗುತ್ತದೆ ಎಂದು ಅವರು ಹೇಳಿದರು.

********************

ಬಂಡೀಪುರದಲ್ಲಿ ನಾಳೆಯಿಂದ ಮೂರು ದಿನಗಳ ಕಾಲ ಅಂತಾರಾಷ್ಟ್ರೀಯ ಮಟ್ಟದ ಹುಲಿ ಮೈತ್ರಿ ಶೃಂಗಸಭೆ ನಡೆಯಲಿದೆ. 23 ರಾಷ್ಟ್ರಗಳು ಪಾಲ್ಗೊಳ್ಳುತ್ತಿರುವ  ದೇಶದ ಮೊದಲ ಶೃಂಗಸಭೆಗಾಗಿ ಬಂಡೀಪುರ ಸಜ್ಜಾಗಿದೆ.

ಉದ್ಘಾಟನಾ ಕಾರ್ಯಕ್ರಮವು ಮೇಲುಕಾಮನಹಳ್ಳಿಯಲ್ಲಿ ನಾಳೆ ಮಧ್ಯಾಹ್ನ ನಡೆಯಲಿದೆ ಎಂದು ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದ ಅರಣ್ಯ ಸಂರಕ್ಷಣಾಧಿಕಾರಿ ಹಾಗೂ ನಿರ್ದೇಶಕರಾದ ಪ್ರಭಾಕರನ್ ತಿಳಿಸಿದ್ದಾರೆ.

ಶೃಂಗಸಭೆಯಲ್ಲಿ ರಷ್ಯಾ, ಶ್ರೀಲಂಕಾ, ಕಾಂಗೋ, ಭೂತಾನ್, ಮಲೇಷ್ಯಾ, ಕಾಂಬೋಡಿಯಾ, ಕಜಕಿಸ್ತಾನ್, ಮೆಕ್ಸಿಕೋ, ಮಂಗೋಲಿಯಾ, ಸೇರಿ ಒಟ್ಟು 23 ದೇಶಗಳ ಅರಣ್ಯ ಇಲಾಖೆಯ ಅಧಿಕಾರಿಗಳು, ವನ್ಯಜೀವಿ ತಜ್ಞರು, ಸಂಶೋಧಕರು ಪಾಲ್ಗೊಳ್ಳುತ್ತಿದ್ದಾರೆ.

********************

ರಾಜ್ಯದಲ್ಲಿ ಬಜೆಟ್ ಅಧಿವೇಶನ ಮುಗಿದ ಬಳಿಕ ಕ್ಯಾಬಿನೆಟ್ ವಿಸ್ತರಣೆಗೆ ಅವಕಾಶ ಇದೆ ಎಂದು ವಿಧಾನ ಪರಿಷತ್ ಮುಖ್ಯ ಸಚೇತಕ ಸಲೀಂ ಅಹಮ್ಮದ್ ತಿಳಿಸಿದ್ದಾರೆ.

ಹುಬ್ಬಳ್ಳಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕ್ಯಾಬಿನೆಟ್ ವಿಸ್ತರಣೆ ಕುರಿತ ಅಂತಿಮ ನಿರ್ಧಾರವನ್ನು ಹೈಕಮಾಂಡ್ ಕೈಗೊಳ್ಳಲಿದೆ. ಪಕ್ಷ ಸಂಘಟನೆ ಬಲಪಡಿಸುವ ಉದ್ದೇಶದಿಂದ ಸುಮಾರು ಐವತ್ತರಷ್ಟು ಮಂತ್ರಿಗಳನ್ನು ಸಂಘಟನೆ ಕಾರ್ಯಕ್ಕೆ ನಿಯೋಜಿಸಬೇಕು ಎಂಬ ಮನವಿಯನ್ನು ಹೈಕಮಾಂಡ್‌ಗೆ ಸಲ್ಲಿಸಲಾಗಿದೆ. ಆ ಸ್ಥಾನಗಳನ್ನು ಹೊಸಬರಿಗೆ ನೀಡಬೇಕು ಎಂಬ ಅಭಿಪ್ರಾಯವೂ ಪಕ್ಷದೊಳಗೆ ಇದೆ ಎಂದರು.

**********ಮುಕ್ತಾಯ**********